# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 265

ಸದಸ್ಯರ ಹೆಸರು : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 09.12.2020

ಉತ್ತರಿಸುವ ಸಚಿವರು : ಕಂದಾಯ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ ಅಧಿವೇಶನದಲ್ಲಿ ಭರವಸೆ ನೀಡಿದಂತೆ ಎಸ್.ಸಿ/ಎಸ್.ಟಿ ಗಳಿಗೆ ನೀಡಲಾದ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ಮಾರಾಟ ಮಾಡಲು ಅವಕಾಶವಿದೆಯೇ; ಇಲ್ಲದಿದ್ದಲ್ಲಿ, ಈ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ನಿವೇಶನಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಈ ಜಮೀನಿನ ವಿಸ್ತೀರ್ಣವೇನು; | ಎಸ್.ಸಿ/ಎಸ್.ಟಿ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ಮಾರಾಟ ಮಾಡಲು ಅವಕಾಶವಿರುವುದಿಲ್ಲ. ಆದರೆ ಅವಶ್ಯಕವಿದ್ದಲ್ಲಿ ಸರ್ಕಾರದಿಂದ ಪೂರ್ವಾನುಮತಿ ಪಡೆಯಬೇಕಾಗಿರುತ್ತದೆ.<br><br>ಬೀದರ್ ನಗರದ ಕುಂಬಾರವಾಡ ಸರ್ವೆ ನಂ.35ರ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಪರಿವರ್ತಿಸಿ ನಿವೇಶನಗಳ ಮಾರಾಟ ಮಾಡುತ್ತಿರುವ ಬಗ್ಗೆ ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ ರವರು ವಿಚಾರಣೆಯನ್ನು ಕೈಗೊಂಡಿರುತ್ತಾರೆ. |
| (ಆ) | ಬೀದರ್ ನಗರದ ಕುಂಬಾರವಾಡ ಸರ್ವೆ ಸಂಖ್ಯೆ: 35ರ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಪರಿವರ್ತಿಸಿ ನಿವೇಶನಗಳ ಮಾರಾಟ ಮಾಡುತ್ತಿರುವ ಬಗ್ಗೆ ಹಿಂದಿನ ಅಧಿವೇಶನದಲ್ಲಿ ತನಿಖೆ ನಡೆಸುವುದಾಗಿ ಈ ಹಿಂದೆ ಸದನದಲ್ಲಿ ಆಶ್ವಾಸನೆ ನೀಡಿದ್ದರೂ ಇಲ್ಲಿಯವರೆಗೆ ತನಿಖೆ ನಡೆಸದಿರಲು ಕಾರಣಗಳೇನು; | |
| (ಇ) | ಬೀದರ್ ಜಿಲ್ಲೆಯಲ್ಲಿ ನೆರೆ ಹಾವಳಿಗೆ ತುತ್ತಾದ ಜಮೀನು ಎಷ್ಟು; ಸಂತ್ರಸ್ಥರಿಗೆ ಪರಿಹಾರ ನೀಡಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು? | ಬೀದರ್ ಜಿಲ್ಲೆಯಲ್ಲಿ ನೆರೆ ಹಾವಳಿಯಿಂದ ಒಟ್ಟು 249507 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿಯಾಗಿದ್ದು, ಈ ಪೈಕಿ ಒಟ್ಟು 73073 ರೈತರಿಗೆ ರೂ.43.17 ಕೋಟಿ ಪರಿಹಾರ ನೀಡಲಾಗಿರುತ್ತದೆ. ಮುಂದುವರೆದು, ಪರಿಹಾರ ನೀಡುವ ಕಾರ್ಯ ಪ್ರಗತಿಯಲ್ಲಿದೆ. |

ಸಂಖ್ಯೆ: ಕಂಇ 13 ಎಲ್ಆರ್ಎಸ್ 2020

(ಆರ್.ಅಶೋಕ)
ಮಾನ್ಯ ಕಂದಾಯ ಸಚಿವರು